ಅಂಗೀಕರಿಸಬೇಕೆಂದು ಕೋರುತ್ತೇನೆ.

ಛೇರ್ಮನ್:- ಪ್ರಸ್ತಾವ ಏನೆಂದರೆ, "ಕರ್ನಾಟಕ ಆಯುರ್ವೇದ ಮತ್ತು ಯುನಾನಿ ವೃತ್ತಿನಿರತ ವೈದ್ಯರ ನೋಂದಣಿ ಮತ್ತು ವೈದ್ಯಕೀಯ ವೃತ್ತಿನಿರತರ ಸಂಕೀರ್ಣ ಉಪಬಂಧಗಳ (ತಿದ್ದುಪಡಿ) ವಿಧೇಯಕ 1992ನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.

9. ದಂಡ ಪ್ರಕ್ರಿಯಾ ಸಂಹಿತೆ (ಕರ್ನಾಟಕ ತಿದ್ದುಪಡಿ) ವಿಧೇಯಕ 1992 ಪರ್ಯಾಲೋಚನಾ ಪ್ರಸ್ತಾವ

ಶ್ರೀ ಡಿ. ಕೆ. ಶಿವಕುಮಾರ್ (ಬಂಧೀಖಾನೆ ಮತ್ತು ಗೃಹ ರಕ್ಷಕ ರಾಜ್ಯ ಮಂತ್ರಿಗಳು):- ಮಾನ್ಯ ಅಧ್ಯಕ್ಷರೇ, ದಂಡ ಪ್ರಕ್ರಿಯಾ ಸಂಹಿತೆ (ಕರ್ನಾಟಕ ತಿದ್ದುಪಡಿ) ವಿಧೇಯಕ - 1992ರನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು.

ಛೇರ್ಮನ್:- ಪ್ರಸ್ತಾವ ಏನೆಂದರೆ, "1993ರ ದಂಡ ಪ್ರಕ್ರಿಯಾ ಸಂಹಿತೆ(ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು.

ಖಂಡ - 2

ಛೇರ್ಮನ್:- "ಖಂಡ ಎರಡು ವಿಧೇಯಕದ ಅಂಗವಾಗಿರುತ್ತದೆ."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ ಎರಡು ಈ ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ 1 ಇತ್ಯಾದಿ

ಛೇರ್ಮನ್:- ಪ್ರಸ್ತಾವ ಏನೆಂದರೆ "ಮೊದಲನೆ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ."

ಪ್ರಸ್ತಾವವನ್ನು ಅಂಗೀಕರಿಸಲಾಯಿತು

(ಮೊದಲನೆ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ಈ ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವ ಅಂಗೀಕಾರ

ಶ್ರೀ ಡಿ. ಕೆ. ಶಿವಕುಮಾರ್: (ಬಂಧೀಖಾನೆ ಮತ್ತು ಗೃಹರಕ್ಷಕ ರಾಜ್ಯ ಸಚಿವರು):- ಮಾನ್ಯ ಅಧ್ಯಕ್ಷರೇ, 1992 ರ ದಂಡ ಪ್ರಕ್ರಿಯಾ ಸಂಹಿತೆ, ಕರ್ನಾಟಕ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಛೇರ್ಮನ್:- ಪ್ರಸ್ತಾವ ಏನೆಂದರೆ, 1992ರ ದಂಡ ಪ್ರಕ್ರಿಯಾ ಸಂಹಿತೆ ಕರ್ನಾಟಕ (ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ವಿಧೇಯಕಕ್ಕೆ ಒಪ್ಪಿಗೆ ನೀಡಿಲಾಯಿತು.

10. 1992ರ ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಿಗಳ (ತಿದ್ದುಪಡಿ) ವಿಧೇಯಕ ಪರ್ಯಾಲೋಚನಾ ಪ್ರಸ್ತಾವ

ಶ್ರೀ ಕೆ. ಜೆ. ಜಾರ್ಜ್:- (ವಸತಿ ಮತ್ತು ನಗರಾಭಿವೃದ್ಧಿ ಸಚಿವರು):- ಮಾನ್ಯ